ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಹೊಸದಾಗಿ ಮಂಜೂರು ಮಾಡಲಾಗಿರುವ ಪಶು ಚಿಕಿತ್ಸಾಲಯಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

418 (529) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಹೊಸದಾಗಿ ಮಂಜೂರು ಮಾಡಲಾಗಿರುವ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು; ಹಾಗೂ ಎಷ್ಟು ಪಶು ಚಿಕಿತ್ಸಾಲಯಗಳನ್ನು ಉನ್ನತೀಕರಿಸಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳನ್ನು ಉನ್ನತೀಕರಿಸಲು ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೊಸದಾಗಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಪಶು ಚಿಕಿತ್ಸಾಲಯಗಳು ಎಷ್ಟು? (ವಿವರ ನೀಡುವುದು)